# All India Radio: Bangalore
# National Bulletin In Kannada
**16.09.2026 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಇಪಿಎಫ್‌ಒ ಕಡ್ಡಾಯ ವೇತನ ಮಿತಿ ೨೫ ಸಾವಿರ ರೂಪಾಯಿಗೆ ಏರಿಕೆ: ಕೇಂದ್ರ ಸಂಪುಟ ಅನುಮೋದನೆ

೨. ಹಿರಿಯ ನಟ ಅನಂತ್ ನಾಗ್ ಅವರಿಗೆ ೨೦೨೪ರ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಘೋಷಣೆ; ಪ್ರಧಾನಿ ಸೇರಿ ಗಣ್ಯರಿಂದ ಅಭಿನಂದನೆ

೩. ಮೂರು ಲಕ್ಷ ರೂಪಾಯಿವರೆಗಿನ ಸಣ್ಣ ಮೌಲ್ಯದ ರಫ್ತಿಗೆ ಕೇಂದ್ರ ಸರ್ಕಾರದಿಂದ ಆರ್‌ಸಿಎಂಸಿ ಪ್ರಮಾಣಪತ್ರದಿಂದ ವಿನಾಯಿತಿ

೪. 'ಸ್ವಚ್ಛತಾ ಹಿ ಸೇವಾ ೨೦೨೬' ಅಭಿಯಾನಕ್ಕೆ ಕೇಂದ್ರ ಸಚಿವ ಸಿ.ಆರ್. ಪಾಟೀಲ್ ಚಾಲನೆ

೫. ನವದೆಹಲಿಯಲ್ಲಿ ನಾಳೆ ೧೬ನೇ ಹಂತದ ಕಲ್ಲಿದ್ದಲು ಗಣಿ ಹರಾಜು ಪ್ರಕ್ರಿಯೆ ಆರಂಭ

---

ಉದ್ಯೋಗಿಗಳ ಭವಿಷ್ಯ ನಿಧಿ ಸಂಸ್ಥೆ-ಇಪಿಎಫ್‌ಒನ ಕಡ್ಡಾಯ ವ್ಯಾಪ್ತಿಗೆ ಒಳಪಡುವ ಮಾಸಿಕ ವೇತನದ ಮೀತಿಯನ್ನು ಪ್ರಸ್ತುತ ಇರುವ ೧೫ ಸಾವಿರ ರೂಪಾಯಿಗಳಿಂದ ೨೫ ಸಾವಿರ ರೂಪಾಯಿಗಳಿಗೆ ಹೆಚ್ಚಿಸಲು ಕೇಂದ್ರ ಸಂಪುಟ ಅನುಮೋದನೆ ನೀಡಿದೆ. ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಈ ನಿರ್ಧಾರದಿಂದ ಹೆಚ್ಚುವರಿಯಾಗಿ ೫೧ ಲಕ್ಷಕ್ಕೂ ಹೆಚ್ಚು ಉದ್ಯೋಗಿಗಳ ಇಪಿಎಫ್‌ಒ ಕಡ್ಡಾಯ ವ್ಯಾಪ್ತಿಗೆ ಸೇರ್ಪಡೆಗೊಳ್ಳಲಿದ್ದು, ಶ್ರಮಿಕ ವರ್ಗಕ್ಕೆ ಸಾಮಾಜಿಕ ಭದ್ರತೆಯ ರಕ್ಷಣೆ ಮತ್ತಷ್ಟು ವಿಸ್ತರಣೆಯಾಗಲಿದೆ ಎಂದರು. ಇದರಿಂದಾಗಿ ಸರ್ಕಾರದ ಮೇಲಿನ ವಾರ್ಷಿಕ ವೆಚ್ಚ ಸುಮಾರು ೧೧ ಸಾವಿರದ ೩೩೯ ಕೋಟಿ ರೂಪಾಯಿಗಳಾಗಲಿದೆ ಎಂದಿದ್ದಾರೆ. ೨೦೦೪ ರಿಂದ ೨೦೧೪ರವರೆಗಿನ ದಶಕದ ಅವಧಿಯಲ್ಲಿ ಇಪಿಎಫ್‌ಒ ವೇತನ ಮಿತಿಯಲ್ಲಿ ಯಾವುದೇ ಬದಲಾವಣೆಗಳಾಗಿರಲಿಲ್ಲ. ತದನಂತರ ಸೆಪ್ಟೆಂಬರ್ ೧೪ರ ನಂತರ ಇದನ್ನು ೧೫ ಸಾವಿರ ರೂಪಾಯಿಗಳಿಗೆ ಹೆಚ್ಚಿಸಲಾಗಿತ್ತು ಎಂದು ಸ್ಮರಿಸಿದರು. ಕಳೆದ ಕೆಲವು ವರ್ಷಗಳಲ್ಲಿ ದೇಶದಲ್ಲಾಗಿರುವ ವೇತನ ಏರಿಕೆ, ಹೆಚ್ಚಿನ ಆದಾಯ, ಉದ್ಯೋಗ ವಲಯ ವಿಸ್ತರಣೆಯನ್ನು ಗಮನದಲ್ಲಿಟ್ಟುಕೊಂಡು ಈ ವೇತನ ಮಿತಿಯನ್ನು ೨೫ ಸಾವಿರ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. ಎಂದರು.

---

ಭಾರತೀಯ ಚಿತ್ರರಂಗಕ್ಕೆ ನೀಡಿದ ಅಪಾರ ಕೊಡುಗೆ ಹಾಗೂ ಹಲವು ದಶಕಗಳ ಚಲನಚಿತ್ರ ಪಯಣವನ್ನು ಗೌರವಿಸಿ ಹಿರಿಯ ನಟ ಅನಂತ್ ನಾಗ್ ಅವರಿಗೆ ೨೦೨೪ ರ ಸಾಲಿನ ಪ್ರತಿಷ್ಠಿತ 'ದಾದಾಸಾಹೇಬ್ ಫಾಲ್ಕೆ' ಪ್ರಶಸ್ತಿಯನ್ನು ಘೋಷಿಸಲಾಗಿದೆ. ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯವು ಇಂದು ಈ ಕುರಿತು ಅಧಿಕೃತ ಪ್ರಕಟಣೆ ಹೊರಡಿಸಿದ್ದು, ಈ ತಿಂಗಳ ೨೨ ರಂದು ಗುಜರಾತ್‌ನ ಕೇವಡಿಯಾದಲ್ಲಿ ನಡೆಯಲಿರುವ ೭೨ ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಈ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು. ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಯಿಂದ ಗೌರವಿಸಲ್ಪಟ್ಟ ಹಿರಿಯ ನಟ ಅನಂತ್ ನಾಗ್ ಅವರಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅಭಿನಂದನೆ ಸಲ್ಲಿಸಿದ್ದಾರೆ. ಅನಂತ್ ನಾಗ್ ಅವರ ಸಹಜ ಅಭಿನಯ, ಅಪರೂಪದ ವೈವಿಧ್ಯತೆ ಮತ್ತು ಕೌಶಲ್ಯವು ದಶಕಗಳಿಂದ ಭಾರತೀಯ ಚಿತ್ರರಂಗದ ಮೇಲೆ ಅಳಿಸಲಾಗದ ಛಾಪನ್ನು ಮೂಡಿಸಿದೆ ಎಂದು ಪ್ರಧಾನಿ ಸಾಮಾಜಿಕ ಜಾಲತಾಣದಲ್ಲಿ ಶ್ಲಾಘಿಸಿದ್ದಾರೆ. ಅವರು ತಮ್ಮ ಪಾತ್ರಗಳಲ್ಲಿ ಅಪರೂಪದ ಆಳ ಹಾಗೂ ನೈಜತೆಯನ್ನು ತರುತ್ತಿದ್ದು, ಈ ಗೌರವವು ಒಬ್ಬ ಮಹಾನ್ ಕಲಾವಿದನಿಗೆ ಸಲ್ಲಬೇಕಾದ ಅರ್ಹ ಗೌರವವಾಗಿದೆ ಎಂದು ಪ್ರಧಾನಿ ಬಣ್ಣಿಸಿದ್ದಾರೆ.

---

ನೂತನ ಹಾಗೂ ಸಣ್ಣ ರಫ್ತುದಾರರಿಗೆ ಅನುಕೂಲ ಮಾಡಿಕೊಡಲು ಮೂರು ಲಕ್ಷ ರೂಪಾಯಿವರೆಗಿನ ರಫ್ತು ಸರಕು ರವಾನೆಗೆ 'ನೋಂದಣಿ ಮತ್ತು ಸದಸ್ಯತ್ವ ಪ್ರಮಾಣಪತ್ರ' ಹೊಂದುವ ಕಡ್ಡಾಯ ನಿಯಮದಿಂದ ಕೇಂದ್ರ ಸರ್ಕಾರ ವಿನಾಯಿತಿ ನೀಡಿದೆ.

ಅಂಚೆ, ಕೊರಿಯರ್ ಹಾಗೂ ಇ-ಕಾಮರ್ಸ್ ಮೂಲಕ ನಡೆಯುವ ಸಣ್ಣ ಪ್ರಮಾಣದ ರಫ್ತು ಮೇಲಿನ ನಿಯಮಾವಳಿಗಳ ಹೊರೆಯನ್ನು ತಗ್ಗಿಸುವುದು ಈ ಕ್ರಮದ ಪ್ರಮುಖ ಉದ್ದೇಶವಾಗಿದೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ.

ಈ ವಿನಾಯಿತಿಯು ಎಂಎಸ್ಎಂಇ, ಕುಶಲಕರ್ಮಿಗಳು ಹಾಗೂ ಹೊಸ ರಫ್ತುದಾರರು ಅಂತಾರಾಷ್ಟ್ರೀಯ ಮಾರುಕಟ್ಟೆಯನ್ನು ಸುಲಭವಾಗಿ ತಲುಪಲು ನೆರವಾಗಲಿದೆ. ರಫ್ತು ಮೌಲ್ಯವು ಮೂರು ಲಕ್ಷ ರೂಪಾಯಿ ಮೀರಿದರೆ ಸಂಬಂಧಪಟ್ಟ ರಫ್ತು ಪ್ರೋತ್ಸಾಹಕ ಮಂಡಳಿಗಳ ಸದಸ್ಯತ್ವ ಪಡೆದು ಸರ್ಕಾರಿ ಸೌಲಭ್ಯಗಳನ್ನು ಮುಂದುವರಿಸಬಹುದು ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

---

ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್, ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ಹಾಗೂ ವಸತಿ ಮತ್ತು ನಗರ ವ್ಯವಹಾರಗಳ ರಾಜ್ಯ ಸಚಿವ ತೋಖಾನ್ ಸಾಹು ಜಂಟಿಯಾಗಿ 'ಸ್ವಚ್ಛತಾ ಹಿ ಸೇವಾ ೨೦೨೫' ಅಭಿಯಾನಕ್ಕೆ ಇಂದು ಚಾಲನೆ ನೀಡಿದರು. ಈ ಬಾರಿಯ ಅಭಿಯಾನ 'ಸ್ವಚ್ಛತೆಯಲ್ಲಿ ಸಹಭಾಗಿತ್ವ; ಸ್ವಚ್ಛ ಭಾರತ, ವಿಕಸಿತ ಭಾರತ' ಎಂಬ ಧ್ಯೇಯವಾಕ್ಯದೊಂದಿಗೆ ನಡೆಯಲಿದೆ. ಇಂದು ಸಂಜೆ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವ ಸಿ.ಆರ್. ಪಾಟೀಲ್, ಸಾರ್ವಜನಿಕ ಸ್ಥಳಗಳ ಹಾಗೂ ಸ್ವಚ್ಛತಾ ಗುರಿ ಘಟಕಗಳ ಪರಿವರ್ತನೆ, ಸ್ವಚ್ಛ ಪಾಠಶಾಲೆ: ಯುವಕರ ಭಾಗವಹಿಸುವಿಕೆ, ಸಫಾಯಿಕರ್ಮಚಾರಿಗಳ ಸುರಕ್ಷತೆ ಹಾಗೂ ಸನ್ಮಾನ ಶಿಬಿರ, ಸ್ವಚ್ಛತೆಯಲ್ಲಿ ಜನರ ಭಾಗವಹಿಸುವಿಕೆ ಮತ್ತು ಸ್ವಚ್ಛತೆಯಿಂದ ಸಮೃದ್ಧಿ ಎಂಬ ಐದು ಸ್ತಂಭಗಳನ್ನು ಈ ಅಭಿಯಾನ ಒಳಗೊಂಡಿದೆ ಎಂದರು. ವಿಶ್ವ ಪ್ರವಾಸೋದ್ಯಮ ದಿನದಂದು ಪ್ರವಾಸಿ ತಾಣಗಳು, ಅಧಿಕ ಜನಸಂದಣಿ ಇರುವ ಪ್ರದೇಶಗಳು ಹಾಗೂ ಪ್ರವಾಸಿ ಸೈಕಲ್ ಕಡಲತೀರಗಳ ಸ್ವಚ್ಛತೆಗೆ ವಿಶೇಷ ಒತ್ತು ನೀಡಲಾಗುವುದು ಎಂದು ಸಚಿವರು ತಿಳಿಸಿದರು.

---

ಕೇಂದ್ರ ಕಲ್ಲಿದ್ದಲು ಸಚಿವಾಲಯವು ೧೪ನೇ ಹಂತದ ವಾಣಿಜ್ಯ ಕಲ್ಲಿದ್ದಲು ಗಣಿ ಹರಾಜು ಪ್ರಕ್ರಿಯೆಗೆ ನಾಳೆ ಹೊಸ ದೆಹಲಿಯಲ್ಲಿ ಚಾಲನೆ ನೀಡಲಿದೆ. ಈ ಹಂತದಲ್ಲಿ ಸಂಪೂರ್ಣವಾಗಿ ಹಾಗೂ ಭಾಗಶಃ ಶೋಧಿಸಲಾದ ಹೊಸ ಕಲ್ಲಿದ್ದಲು ಬ್ಲಾಕ್‌ಗಳನ್ನು ಹರಾಜಿಗೆ ನೀಡಲಾಗುವುದು. ಈ ಪ್ರಕ್ರಿಯೆಯು ಯಾವುದೇ ಅಂತಿಮ ಬಳಕೆ ನಿರ್ಬಂಧಗಳಿಲ್ಲದೆ, ಅತ್ಯಂತ ಸರಳ ನಿಯಮಗಳಡಿಯಲ್ಲಿ ಮುಂದುವರಿಯಲಿದೆ ಎಂದು ಸಚಿವಾಲಯ ತಿಳಿಸಿದೆ.

ಈ ಯೋಜನೆಯಡಿ ಸ್ವಯಂಚಾಲಿತ ಮಾರ್ಗದ ಮೂಲಕ ಶೇಕಡಾ ೧೦೦ ರಷ್ಟು ವಿದೇಶಿ ನೇರ ಹೂಡಿಕೆಗೆ ಅವಕಾಶ ನೀಡಲಾಗಿದೆ. ಹೊಸ ಹಾಗೂ ಸಣ್ಣ ಹರಾಜುದಾರರು ಸುಲಭವಾಗಿ ಪ್ರವೇಶಿಸಲು ಮತ್ತು ಸ್ಥಾಪಿತ ಗಣಿಗಾರಿಕೆ ಸಂಸ್ಥೆಗಳು ಸ್ಪರ್ಧಿಸಲು ಅನುಕೂಲವಾಗುವಂತೆ ಈ ನಿಬಂಧನೆಗಳನ್ನು ವಿನ್ಯಾಸಗೊಳಿಸಲಾಗಿದೆ.

---

ಗಡಿಯಾಚೆಗಿನ ಶಸ್ತ್ರಾಸ್ತ್ರ, ಸ್ಫೋಟಕಗಳು ಹಾಗೂ ಮಾದಕ ದ್ರವ್ಯಗಳ ಅಕ್ರಮ ಸಾಗಣೆ ಮತ್ತು ಯುವಕರನ್ನು ಉಗ್ರವಾದಕ್ಕೆ ಪ್ರಚೋದಿಸುತ್ತಿದ್ದ 'ಶಹಜಾದ್ ಭಟ್ಟಿ ನೆಟ್‌ವರ್ಕ್' ಎಸ್ ಬಿ ಎನ್ ಅನ್ನು ಕೇಂದ್ರ ಸರ್ಕಾರವು ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯ್ದೆ ಯುಎಪಿಎ ಅಡಿಯಲ್ಲಿ ಭಯೋತ್ಪಾದಕ ಸಂಸ್ಥೆ ಎಂದು ಅಧಿಕೃತವಾಗಿ ಘೋಷಿಸಿದೆ. ಈ ಕುರಿತು ಕೇಂದ್ರ ಗೃಹ ಸಚಿವಾಲಯ ಗೆಜೆಟ್ ಅಧಿಸೂಚನೆ ಹೊರಡಿಸಿದೆ.

---

ಸೌದಿ ಅರೇಬಿಯಾದ ಪವಿತ್ರ ಮೆಕ್ಕಾ ನಗರದ ಸಮೀಪ ನಡೆದ ಡ್ರೋನ್ ದಾಳಿಗೆ ಭಾರತ ತೀವ್ರ ಕಳವಳ ವ್ಯಕ್ತಪಡಿಸಿದೆ.

ಈ ಕುರಿತು ಸುದ್ದಿಗಾರರಿಗೆ ಮಾಹಿತಿ ನೀಡಿರುವ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಸೌದಿ ಅರೇಬಿಯಾದ ಸಾರ್ವಭೌಮ ಭೂಪ್ರದೇಶದ ಮೇಲಿನ ದಾಳಿಗಳನ್ನು ಹಾಗೂ ನಾಗರಿಕರ ಜೀವ ಮತ್ತು ಸಾರ್ವಜನಿಕ ಮೂಲಸೌಕರ್ಯಗಳಿಗೆ ಧಕ್ಕೆ ತರುವಂತಹ ಕೃತ್ಯಗಳನ್ನು ಭಾರತ ಖಂಡಿಸುತ್ತದೆ ಎಂದು ಪುನರುಚ್ಚರಿಸಿದ್ದಾರೆ.

---

ಇಸ್ರೇಲಿ ದಾಳಿಯಿಂದ ಹಾನಿಗೊಳಗಾಗಿದ್ದ ಗಾಜಾ ನಗರದ ಏಳು ಅಂತಸ್ತಿನ ವಸತಿ ಕಟ್ಟಡವೊಂದು ಇಂದು ಇದ್ದಕ್ಕಿದ್ದಂತೆ ಕುಸಿದುಬಿದ್ದ ಪರಿಣಾಮ, ಕನಿಷ್ಠ ೨೦ ಫೆಲೆಸ್ತೀನಿಯನ್ನರು ಮೃತಪಟ್ಟು, ೧೪ ಜನರು ತೀವ್ರವಾಗಿ ಗಾಯಗೊಂಡಿದ್ದಾರೆ. ಮೃತರ ಪೈಕಿ ಐದು ಮಂದಿ ಮಕ್ಕಳಿದ್ದಾರೆ ಎಂದು ಗಾಜಾ ನಾಗರಿಕ ರಕ್ಷಣಾ ಅಧಿಕಾರಿಗಳು ತಿಳಿಸಿದ್ದಾರೆ. ಕುಸಿದ ಕಟ್ಟಡದ ಅವಶೇಷಗಳ ಅಡಿಯಲ್ಲಿ ಸುಮಾರು ೧೦೦ ಕ್ಕೂ ಹೆಚ್ಚು ಜನರು ಸಿಲುಕಿರುವ ಸಾಧ್ಯತೆಯಿದ್ದು, ರಕ್ಷಣಾ ಸಿಬ್ಬಂದಿ ತೆರವು ಕಾರ್ಯಾಚರಣೆಯನ್ನು ಮುಂದುವರೆಸಿದ್ದಾರೆ.

---

ಭಾರತದೊಂದಿಗಿನ ಮುಕ್ತ ವ್ಯಾಪಾರ ಒಪ್ಪಂದವನ್ನು ಐತಿಹಾಸಿಕ ಎಂದು ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಬಣ್ಣಿಸಿದ್ದಾರೆ. ಇದು ಭಾರತದ ೧೪೦ ಕೋಟಿ ಗ್ರಾಹಕರ ಬೃಹತ್ ಮಾರುಕಟ್ಟೆಗೆ ಪ್ರವೇಶ ಕಲ್ಪಿಸುವ ಮೂಲಕ ದೇಶದ ಉದ್ಯೋಗ ಹಾಗೂ ಆದಾಯವನ್ನು ಹೆಚ್ಚಿಸಲಿದೆ ಎಂದಿದ್ದಾರೆ. ಈ ಒಪ್ಪಂದ ಜಾರಿಗೆ ಸಂಬಂಧಿಸಿದ ಮಸೂದೆಗೆ ನ್ಯೂಜಿಲೆಂಡ್ ಸಂಸತ್ತು ೯೩-೨೯ ಮತಗಳ ಬೆಂಬಲದೊಂದಿಗೆ ಅನುಮೋದನೆ ನೀಡಿದೆ.

---

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನವದೆಹಲಿಯ ಯಶೋಭೂಮಿಯಲ್ಲಿ ನಾಳೆ ಸೆಮಿಕಾನ್ ಇಂಡಿಯಾ ೨೦೨೬ರ ಐದನೇ ಆವೃತ್ತಿಯನ್ನು ಉದ್ಘಾಟಿಸಲಿದ್ದಾರೆ. ಮೂರು ದಿನಗಳ ಈ ಸಮ್ಮೇಳನ, ಜಾಗತಿಕ ಅರೆವಾಹಕ ಮತ್ತು ಎಲೆಕ್ಟ್ರಾನಿಕ್ಸ್ ಕ್ಷೇತ್ರದಲ್ಲಿ ಸಹಕಾರ ಉತ್ತೇಜನ, ನಾವೀನ್ಯತೆಗೆ ಚಾಲನೆ, ಉತ್ಪಾದನಾ ಸಾಮರ್ಥ್ಯ ಬಲಪಡಿಸುವುದು, ಹೂಡಿಕೆ ಆಕರ್ಷಣೆ ಹಾಗೂ ಭವಿಷ್ಯಕ್ಕೆ ಸಜ್ಜಾದ ಪ್ರತಿಭೆಗಳನ್ನು ರೂಪಿಸುವ ಪ್ರಮುಖ ವೇದಿಕೆಯಾಗಲಿದೆ.

---

ಅಂತಾರಾಷ್ಟ್ರೀಯ ಜಲಪ್ರದೇಶದಲ್ಲಿ ಭಾರತೀಯ ನೌಕಾಪಡೆಯ ಹಡಗಿಗೆ ಪಾಕಿಸ್ತಾನದ ನೌಕಾಪಡೆಯ ಘಟಕವೊಂದು ಡಿಕ್ಕಿ ಹೊಡೆದ ಘಟನೆಗೆ ಸಂಬಂಧಿಸಿದಂತೆ, ದೆಹಲಿಯಲ್ಲಿರುವ ಪಾಕಿಸ್ತಾನ ಹೈಕಮಿಷನ್‌ನ ಪ್ರಭಾರಿ ಅವರಿಗೆ ಕೇಂದ್ರ ವಿದೇಶಾಂಗ ಸಚಿವಾಲಯ ಇಂದು ಸಮನ್ಸ್ ನೀಡಿದ್ದು, ಪಾಕ್ ನೌಕಾಪಡೆಯ ಈ ಸ್ವೀಕಾರಾರ್ಹವಲ್ಲದ ನಡವಳಿಕೆಯ ವಿರುದ್ಧ ತೀವ್ರ ಪ್ರತಿಭಟನೆ ವ್ಯಕ್ತಪಡಿಸಿದೆ.

---

ಛತ್ತೀಸ್‌ಗಢದ ಜಗದಲ್‌ಪುರದಲ್ಲಿರುವ ರಾಷ್ಟ್ರೀಯ ತನಿಖಾ ಸಂಸ್ಥೆಯ ವಿಶೇಷ ನ್ಯಾಯಾಲಯ ೨೦೧೩ ರ ಭೀಕರ ಜೀರಂ ಕಣಿವೆ ಮಾವೋವಾದಿ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಎಲ್ಲಾ ಹತ್ತು ಜನ ಅಪರಾಧಿಗಳಿಗೆ ಇಂದು ಮರಣದಂಡನೆ ಶಿಕ್ಷೆ ವಿಧಿಸಿ ತೀರ್ಪು ನೀಡಿದೆ. ಈ ತೀರ್ಪನ್ನು ಹೈಕೋರ್ಟ್‌ನಲ್ಲಿ ಪ್ರಶ್ನಿಸಿ ಮೇಲ್ಮನವಿ ಸಲ್ಲಿಸಲು ಅಪರಾಧಿಗಳಿಗೆ ೩೦ ದಿನಗಳ ಕಾಲಾವಕಾಶ ನೀಡಲಾಗಿದೆ.

---

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ವಿವಿಧ ಸಂದರ್ಭಗಳಲ್ಲಿ ಬಂದಿರುವ ನೆನಪಿನ ಕಾಣಿಕೆಗಳು ಹಾಗೂ ಉಡುಗೊರೆಗಳ ಇ-ಹರಾಜು ಪ್ರಕ್ರಿಯೆಯು ನಾಳೆಯಿಂದ ಪ್ರಾರಂಭವಾಗಲಿದೆ. ಈ ಕುರಿತು ನವದೆಹಲಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್, ಈ ವರ್ಷದ ಹರಾಜಿನಲ್ಲಿ ಸುಮಾರು ೧ ಸಾವಿರದ ೫೦೦ ವಸ್ತುಗಳನ್ನು ಪ್ರದರ್ಶನಕ್ಕಿಡಲಾಗಿದೆ ಎಂದು ತಿಳಿಸಿದರು.

__________ ಮುಕ್ತಾಯ __________